ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	1055 (1178)
ಸದಸ್ಯರ ಹೆಸರು:	ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ಸಚಿವರು	ಮಾನ್ಯ ಕಂದಾಯ ಸಚಿವರು
ಉತ್ತರಿಸಬೇಕಾದ ದಿನಾಂಕ:	22-09-2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸದೇ ಅನುಭವ ಮತ್ತು ತರಬೇತಿ ಇಲ್ಲದೇ ಸಚಿವಾಲಯದ ಬಡ್ತಿ ಪಡೆದ ನೌಕರರುಗಳನ್ನು ತಾಲ್ಲೂಕು ತಹಶೀಲ್ದಾರ್ ಹುದ್ದೆಗೆ ನೇಮಕ ಮಾಡುತ್ತಿರುವುದು ಸರ್ಕಾರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ವಿರುದ್ಧವಲ್ಲವೆ; (ವಿವರಗಳನ್ನು ನೀಡುವುದು)	ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು 1977ರ ನಿಯಮ 16-(ಎ)(i)(ii) ರನ್ವಯ ಈ ನಿಯಮಗಳಲ್ಲಿ ಅಥವಾ ಸೇವೆಯ ಅಥವಾ ಹುದ್ದೆಯ ಸಂಬಂಧದಲ್ಲಿ ವಿಶೇಷವಾಗಿ ರಚಿಸಿದ ಭರ್ತಿ ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ ರಾಜ್ಯ ಸಿವಿಲ್ ಸೇವೆಗಳ ಅಧಿಕಾರಿಗಳನ್ನು ತತ್ಸಮಾನ ದರ್ಜೆಯ ಹುದ್ದೆಯನ್ನು ಹೊಂದಿರುವ ಅಧಿಕಾರಿಗಳನ್ನು ಪ್ರತಿ ನಿಯೋಜನೆ ಮಾಡುವ ಮೂಲಕ ಅವಕಾಶ ಕಲ್ಪಿಸಿರುವುದರಿಂದ ತಹಶೀಲ್ದಾರ್ ತತ್ಸಮಾನ ವೃಂದದ ಸಚಿವಾಲಯ / ಇತರೆ ಇಲಾಖೆಯ ಅಧಿಕಾರಿಗಳನ್ನು ನೇಮಿಸಲು ಅವಕಾಶ ಕಲ್ಪಿಸಲಾಗಿತ್ತು.
ಆ)	ಈ ರೀತಿಯಲ್ಲಿ ಸಚಿವಾಲಯದ ಮತ್ತು ವಿಧಾನ ಸಭೆ/ವಿಧಾನ ಪರಿಷತ್ ನಿಂದ ತಹಶೀಲ್ದಾರರಾಗಿ ಹೋದ ಅಧಿಕಾರಿಗಳಿಂದ ಉಂಟಾಗಿರುವ ಲೋಪಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ;	ಸಚಿವಾಲಯ ಹಾಗೂ ಮಾತೃ ಇಲಾಖೆ ವೃಂದದ ಅಧಿಕಾರಿಗಳ ಕರ್ತವ್ಯಲೋಪವು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ಕಾಲಕಾಲಕ್ಕೆ ಪರಿಶೀಲಿಸಿ, ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.
ಇ)	ಈ ರೀತಿಯಲ್ಲಿ ಸಚಿವಾಲಯದ / ನಿಯೋಜನೆ ಮೇರೆಗೆ ಬೇರೆ ಇಲಾಖೆ / ನಿಗಮ ಮಂಡಳಿಗಳಿಗೆ ನಿಯೋಜಿಸಿದ್ದಲ್ಲಿ, ಮಾತೃ ಇಲಾಖೆಯ ಸಿಬ್ಬಂದಿಗಳು ಮತ್ತು ಅಧಿಕಾರಿಗಳು ಬಡ್ತಿಯಿಂದ ವಂಚಿತರಾಗುವುದಿಲ್ಲವೇ; (ಇದಕ್ಕೆ ಸರ್ಕಾರದ ಸ್ಪಷ್ಟೀಕರಣವೇನು;	ಸಚಿವಾಲಯ / ಇತರೆ ಇಲಾಖೆಯ ತತ್ಸಮಾನ (ವೇತನ ಶ್ರೇಣಿಯ) ಹುದ್ದೆಯ ಅಧಿಕಾರಿಗಳನ್ನು ತಹಶೀಲ್ದಾರ್ ಹುದ್ದೆಗೆ ಕೇವಲ ನಿಯೋಜನೆ ಮೇರೆಗೆ ಮಾತ್ರ ನೇಮಿಸುತ್ತಿದ್ದ ಪ್ರಯುಕ್ತ ಮಾತೃ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳು ಯಾವುದೇ ರೀತಿಯಿಂದಲು ಬಡ್ತಿಯಿಂದ ವಂಚಿತರಾಗುವ ಸಾಧ್ಯತೆ ಇರುವುದಿಲ್ಲ.

...2...

ಈ)	ಈ ರೀತಿ ಬೇರೆ ಇಲಾಖೆ ನಿಗಮ / ಮಂಡಳಿಗೆ ನಿಯೋಜನೆ ಮೇಲೆ ಕಳುಹಿಸದಿರಲು ಸರ್ಕಾರದ ಕ್ರಮಗಳೇನು? (ವಿವರಗಳನ್ನು ನೀಡುವುದು)	ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 179 ಸೇನಿನಿ 2020, ದಿನಾಂಕ:30-07-2021 ರನ್ವಯ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು 2021ರ ನಿಯಮ 16(ಎ)(ii)ಗೆ ತಿದ್ದುಪಡಿಯಾಗಿದ್ದು, ಅದರನ್ವಯ ಯಾವುದೇ ಸೇವೆ ಅಥವಾ ಹುದ್ದೆಗೆ ಸೇರಿದ ಸರ್ಕಾರಿ ಅಧಿಕಾರಿಯನ್ನು ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ವೃಂದದ ಹುದ್ದೆಗಳಿಗೆ ವರ್ಗಾವಣೆ, ನಿಯೋಜನೆ ಅಥವಾ ನಿಯುಕ್ತಿಗೊಳಿಸತಕ್ಕದ್ದಲ್ಲ ಎಂದು ಅಧಿಸೂಚನೆ ಹೊರಡಿಸಿದ್ದು, ಅದರನ್ವಯ ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಕಂಇ 306 ಎಎಸ್‌ಡಿ 2021

(ಆರ್. ಅಶೋಕ)
ಕಂದಾಯ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 179 ಸೇನೆನಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 30.07.2021.

ಅಧಿಸೂಚನೆ

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಅಧಿನಿಯಮ ಸಂಖ್ಯೆ: 14)ರ 3ನೇ ಪ್ರಕರಣದ 2(ಎ) ಉಪ ಪ್ರಕರಣವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅದರಲ್ಲಿ ಅಗತ್ಯಪಡಿಸಲಾದಂತೆ, ಕರಡು ನಿಯಮಗಳನ್ನು ದಿನಾಂಕ: 13.05.2021ರ ರಾಜ್ಯ ಪತ್ರದ ವಿಶೇಷ ಸಂಚಿಕೆಯ ಭಾಗ IV-ಎ(ನಂ-531)ರಲ್ಲಿ ಅಧಿಸೂಚನೆ ಸಂಖ್ಯೆ: ಸಿಆಸುಇ 179 ಸನೆನಿ 2020, ದಿನಾಂಕ: 13.05.2021ರಲ್ಲಿ ಪ್ರಕಟಿಸಿ ಅದರಿಂದ ಬಾಧಿತರಾಗಬಹುದಾದಂತಹ ವ್ಯಕ್ತಿಗಳಿಂದ ಅಧಿಕೃತ ರಾಜ್ಯಪತ್ರದಲ್ಲಿ ಆ ಕರಡು ನಿಯಮಗಳು ಪ್ರಕಟವಾದ ದಿನಾಂಕದಿಂದ 15 ದಿನಗಳ ಒಳಗಾಗಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಲಾಗಿರುವುದರಿಂದ,

ಸದರಿ ರಾಜ್ಯಪತ್ರವನ್ನು ದಿನಾಂಕ: 13ನೇ ಮೇ 2021ರಂದು ಸಾರ್ವಜನಿಕರಿಗೆ ದೊರೆಯುವಂತೆ ಮಾಡಲಾಗಿರುವುದರಿಂದ,

ಮತ್ತು ಸ್ವೀಕೃತವಾಗಿರುವ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸಿರುವುದರಿಂದ,

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಅಧಿನಿಯಮ ಸಂಖ್ಯೆ: 14)ರ 3ನೇ ಪ್ರಕರಣದ 1ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಕೆಳಗಿನ ನಿಯಮಗಳನ್ನು ರಚಿಸುತ್ತದೆ, ಎಂದರೆ:-

ನಿಯಮಗಳು

1. **ಹೆಸರು ಮತ್ತು ಪ್ರಾರಂಭ**:- (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು, 2021 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ನಿಯಮ 16ಕ್ಕೆ ತಿದ್ದುಪಡಿ**.- ಸದರಿ ನಿಯಮಗಳ ನಿಯಮ 16ರ ಖಂಡ (ಎ)ರ ಉಪ ನಿಯಮ (ii)ರ ಕೆಳಗೆ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು:-

"ಪರಂತು, ಯಾವುದೇ ಸೇವೆ ಅಥವಾ ಹುದ್ದೆಗೆ ಸೇರಿದ ಸರ್ಕಾರಿ ಅಧಿಕಾರಿಯನ್ನು, ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ವೃಂದದ ಹುದ್ದೆಗಳಿಗೆ ವರ್ಗಾವಣೆ, ನಿಯೋಜನೆ ಅಥವಾ ಸ್ಥಳನಿಯುಕ್ತಿಗೊಳಿಸತಕ್ಕದ್ದಲ್ಲ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

-Hemalatha. G. 30/7

(ಹೇಮಲತ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸೇವಾ ನಿಯಮಗಳು-ಎ, ಕೊಠಡಿ ಸಂಖ್ಯೆ-31, ವಿಧಾನಸೌಧ, ನೆಲಮಹಡಿ ಇಲ್ಲಿಗೆ ಕಳುಹಿಸುವಂತೆ ಕೋರಲಾಗಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ), (ಇ &ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು,
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
5. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
6. ಮಾನ್ಯ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು.
7. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು,
8. *ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ನವದೆಹಲಿ.
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ. ರಸ್ತೆ, ಬೆಂಗಳೂರು-560009.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು.
15. ಎಲ್ಲಾ ಇಲಾಖಾ ಮುಖ್ಯಸ್ಥರು/ ಎಲ್ಲಾ ಪ್ರಾದೇಶಿಕ ಆಯುಕ್ತರು/
16. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್/ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
17. ಸರ್ಕಾರದ ಉಪ ಕಾರ್ಯದರ್ಶಿ, (ಸಚಿವ ಸಂಪುಟ)(ವಿಷಯ ಸಂಖ್ಯೆ:ಸಿ:297/2021)
18. ಸರ್ಕಾರದ ಎಲ್ಲಾ ವಿಶೇಷ/ ಅಪರ/ ಜಂಟಿ/ ಉಪ/ ಅಧೀನ ಕಾರ್ಯದರ್ಶಿಗಳು
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
20. ಶಾಖಾ ರಕ್ಷಾ ಕಡತ/ ಅಧಿಕ ಪ್ರತಿಗಳು

(*ಮುಖ ಪತ್ರದೊಂದಿಗೆ)